www.prepp.in

Prepp
Your Personal Exams Guide

KVMS-D-KND

# Civil Services (Main) Examination, 2026

## ಕನ್ನಡ / KANNADA

## ಪತ್ರಿಕೆ II / Paper II

## (ಸಾಹಿತ್ಯ) / ( LITERATURE )

ವೇಳೆ : ಮೂರು ಗಂಟೆ
*Time Allowed : **Three** Hours*

ಗರಿಷ್ಠ ಅಂಕಗಳು : **250**
*Maximum Marks : **250***

---

### ಪ್ರಶ್ನೆ ಪತ್ರಿಕೆ ವಿಶೇಷ ಸೂಚನೆಗಳು

**ದಯವಿಟ್ಟು ಪ್ರಶ್ನೆಗಳಿಗೆ ಉತ್ತರಿಸುವ ಮೊದಲು ಕೆಳಗಿನ ಪ್ರತಿಯೊಂದು ಸೂಚನೆಗಳನ್ನು ಸರಿಯಾಗಿ ಓದಿರಿ :**

ಇದರಲ್ಲಿ **ಎಂಟು** ಪ್ರಶ್ನೆಗಳಿದ್ದು **ಎರಡು ಭಾಗಗಳಲ್ಲಿ** ವಿಂಗಡಿಸಲಾಗಿದೆ.

ಅಭ್ಯರ್ಥಿಗಳು ಎಲ್ಲಾ ಪ್ರಶ್ನೆಗಳಲ್ಲಿ **ಐದು** ಪ್ರಶ್ನೆಗಳಿಗೆ ಉತ್ತರಿಸಬೇಕು.

ಅಭ್ಯರ್ಥಿಗಳು ಪ್ರಶ್ನೆಗಳ ಸಂಖ್ಯೆ **1** ಮತ್ತು **5**ಕ್ಕೆ ಉತ್ತರಿಸುವುದು ಕಡ್ಡಾಯ, ಮತ್ತು ಇನ್ನುಳಿದ **ಮೂರು** ಪ್ರಶ್ನೆಗಳಲ್ಲಿ ಪ್ರತಿಯೊಂದು ವಿಭಾಗದಿಂದ ಕನಿಷ್ಠ **ಒಂದು** ಪ್ರಶ್ನೆಗಾದರೂ ಉತ್ತರಿಸಬೇಕು.

ಪ್ರತಿಯೊಂದು ಪ್ರಶ್ನೆ / ಭಾಗವು ಅಂಕಗಳನ್ನು ಆಯಾ ಪ್ರಶ್ನೆಗಳ ಮುಂದೆಯೇ ನಮೂದಿಸಲಾಗಿದೆ.

ಉತ್ತರಗಳನ್ನು ಅತ್ಯಗತ್ಯವಾಗಿ **ಕನ್ನಡದಲ್ಲೇ (ಕನ್ನಡ ಲಿಪಿಯಲ್ಲೇ)** ಬರೆಯಬೇಕು.

ಕೆಲವು ಪ್ರಶ್ನೆಗಳಿಗೆ ಉತ್ತರಿಸಲು ನಿರ್ದಿಷ್ಟಪಡಿಸಿದ ಶಬ್ದಗಳ ಮಿತಿಯನ್ನು ಸರಿಯಾಗಿ ಪಾಲಿಸಬೇಕು.

ಉತ್ತರಿಸಿದ ಪ್ರಶ್ನೆಗಳನ್ನು ಕ್ರಮಬದ್ಧವಾಗಿ ಪರಿಗಣಿಸಿ ಎಣಿಕೆ ಮಾಡಲಾಗುವುದು. ಅಪೂರ್ಣ ಉತ್ತರಗಳನ್ನು ಹೊಡೆದು ಹಾಕದಿದ್ದಲ್ಲಿ ಅವುಗಳನ್ನು ಎಣಿಕೆಯಲ್ಲಿ ಪರಿಗಣಿಸಲಾಗುತ್ತದೆ. ಪ್ರಶ್ನೋತ್ತರ ಸಹಿತವಾಗಿರುವ ಪುಸ್ತಿಕೆಯಲ್ಲಿ ಬರೆಯದೆ ಉಳಿದ ಪೂರ್ಣ ಖಾಲಿ ಪುಟಗಳನ್ನು ಮತ್ತು ಭಾಗಶಃ ಖಾಲಿ ಇರುವ ಪುಟಗಳನ್ನು ಸ್ಪಷ್ಟವಾಗಿ ಹೊಡೆದು ಹಾಕಬೇಕು.

### Question Paper Specific Instructions

***Please read each of the following instructions carefully before attempting questions :***

*There are **EIGHT** questions divided in **TWO SECTIONS**.*

*Candidate has to attempt **FIVE** questions in all.*

*Questions no. **1** and **5** are compulsory and out of the remaining, any **THREE** are to be attempted choosing at least **ONE** question from each section.*

*The number of marks carried by a question / part is indicated against it.*

*Answers must be written in **KANNADA (Kannada script)**.*

*Word limit in questions, wherever specified, should be adhered to.*

*Attempts of questions shall be counted in sequential order. Unless struck off, attempt of a question shall be counted even if attempted partly. Any page or portion of the page left blank in the Question-cum-Answer Booklet must be clearly struck off.*

---

www.prepp.in

Prepp
Your Personal Exams Guide

## SECTION A

**Q1.** ಈ ಕೆಳಗಿನ ಪದ್ಯಗಳ ಸಂದರ್ಭವನ್ನು ಸೂಚಿಸಿ ಅವುಗಳ ಭಾವ ಮತ್ತು ಸ್ವಾರಸ್ಯವನ್ನು ಕುರಿತು ಬರೆಯಿರಿ. (ಪ್ರತಿಯೊಂದೂ 150 ಪದಗಳ ಉತ್ತರ ಮಿತಿಯಲ್ಲಿ) *10×5=50*

(a) ಮೊರೆಯ ಪರಿಗಳ್ ಭೋರೆಂದೋರಂತೆ ಮಂಗಳ ಗೀತಿಗಳ್
ನೆರೆಯೆ ಗಣಿಕಾನೀಕಂ ಬಂದಾಡೆ ಪುಣ್ಯಜಲಂಗಳಿಂ
ತರಿಸಿ ಮಿಸಿಸುತ್ತಾಗಳ್ ತಾಂ ತನ್ನ ಕೈಯ್ಯೊಳೆ ಕಟ್ಟಿದಂ
ಕುರುಪರಿವೃಢಂ ಕರ್ಣಂಗಾ ವೀರಪಟ್ಟದ ಪಟ್ಟಮಂ *10*

(b) ಉಟ್ಟುದ ತೊರೆದವಂಗೆ ಊರೇನು, ಕಾಡೇನು ?
ನಷ್ಟಸಂತಾನಕ್ಕೆ ಕುಲವೇನು, ಫಲವೇನು ?
ಹುಟ್ಟುಗೆಟ್ಟಾತಂಗೆ ಪುಣ್ಯವೇನು, ಪಾಪವೇನು ?
ಅದು ಕೆಟ್ಟದು, ಅದು ಕೆಟ್ಟದು
ನಿನ್ನ ನೀನರಿಯದೆ ದಿಟ್ಟ ಬಯಲಲ್ಲಿ
ಬಿದ್ದೆಯಲ್ಲಾ ಅಜಗಣ್ಣ ತಂದೆ ! *10*

(c) ಸತ್ಯಧರ್ಮಗಳ ನಿತ್ಯವು ಬೋಧಿಸೆ
ತೊತ್ತಿನ ಮನಸಿಗೆ ಸೊಗಸೀತೆ
ತತ್ವದ ಅರ್ಥವ ವಿಚಿತ್ರದಿ ಪೇಳೆ
ಕತ್ತೆಯ ಚಿತ್ತಕೆ ಹತ್ತೀತೆ
ಪುತ್ಥಳಿ ಬೊಂಬೆಯ ಚಿತ್ರದಿ ಬಣ್ಣಿಸಿ
ಮುತ್ತು ಕೊಟ್ಟರೆ ಮಾತನಾಡೀತೆ
ಕತ್ತುರಿ ತಿಲಕವನೊತ್ತಿ ಫಣೆಯೊಳಿಡೆ
ಅರ್ಥಿಯ ತೋರದೆ ಇದ್ದೀತೆ *10*

(d) ಸರಳ ಕೊರತೆಯೊ ಸಾರಥಿಯ ಮ
ತ್ಸರವೊ ರಥದ ವಿಘಾತಿಯೋ ದು
ರ್ಧರ ಧನುರ್ಭಂಗವೊ ಮಹಾಸ್ತ್ರ ವ್ಯಥೆಯೊ ರವಿಸುತನ
ಹುರುಳು ಗೆಡಿಸಿದರೆಂತು ರಿಪುರಾ
ಯರಿಗೆ ನಾವ್ ಗೋಚರವೆ ದುರಿತೋ
ತ್ಕರುಷವೈಸಲೆ ನಮ್ಮ ಕೆಡಿಸಿತು ಶಿವಶಿವಾ ಎಂದ *10*

www.prepp.in

Prepp
Your Personal Exams Guide

(e) ಕೊಡದ ಸಾಲಂದದ ಮುಗಿಲ ಕಾಮನಬಿಲ್ಲು
ಬಡಿಗೆಯಿಂ ಬಡಿಯೆ ದೈವಗಳು
ಒಡೆದಂತೆ ಗುಡುಗಾದುದೊಳಗಿದ್ದ ನೀರು ತೊ
ಟ್ಟಿಡುವಂತೆ ಕರೆದುದು ವೃಷ್ಟಿ 10

**Q2. ಕೆಳಗಿನ ಎಲ್ಲಾ ಪ್ರಶ್ನೆಗಳಿಗೂ ಉತ್ತರಿಸಿ :**

(a) ಪಂಪ ಕವಿಯ ಕರ್ಣನ ಪಾತ್ರದ ಮೂಲಕ ವೀರಯುಗದ ಶೌರ್ಯ ಮತ್ತು ತ್ಯಾಗದ ಮೌಲ್ಯಗಳನ್ನು ಹೇಗೆ ಪ್ರತಿಪಾದಿಸಿದ್ದಾನೆ ವಿಶ್ಲೇಷಿಸಿ. 20

(b) ವಿದ್ಯುಚ್ಚೋರನೆಂಬ ರಿಸಿಯ ಕಳ್ಳತನದ ತಂತ್ರಗಳು ಮತ್ತು ಪರಿಣಾಮಗಳನ್ನು ಸಮಕಾಲೀನ ನೆಲೆಯಲ್ಲಿ ವಿವೇಚಿಸಿ. 20

(c) ಅಕ್ಕಮಹಾದೇವಿಯ ಸ್ತ್ರೀ ಅಭಿವ್ಯಕ್ತಿ ಸ್ವಾತಂತ್ರ್ಯವನ್ನು ಆಕೆಯ ವಚನಗಳ ಮೂಲಕ ವಿವರಿಸಿ. 10

**Q3. ಕೆಳಗಿನ ಎಲ್ಲಾ ಪ್ರಶ್ನೆಗಳಿಗೂ ಉತ್ತರಿಸಿ :**

(a) ಕುಮಾರವ್ಯಾಸ ಭಾರತದ ಕರ್ಣ ಮತ್ತು ಅರ್ಜುನರ ಯುದ್ಧ ಪ್ರಸಂಗದಲ್ಲಿ ಕಂಡು ಬರುವ ಯುದ್ಧ ನೀತಿಯ ಬಗ್ಗೆ ಬರೆಯಿರಿ. 20

(b) "ಮಾಡಿ ತೆಲ್ಲಂ ಪೂಜೆಯಾಗಿ, ಆಡಿ ತೆಲ್ಲಂ ಸ್ತುತಿಯಾಗಿ" - ಎಂಬ ಮಾತು ನಂಬಿಯಣ್ಣನ ಜೀವನದಲ್ಲಿ ಉಂಟುಮಾಡಿದ ಪರಿಣಾಮಗಳನ್ನು ವಿವರಿಸಿ. 20

(c) ಕನಕದಾಸರ ಕೀರ್ತನೆಗಳಲ್ಲಿ ಸಾಮಾಜಿಕ ಸಮಾನತೆಯ ಪರಿಕಲ್ಪನೆ ಹೇಗೆ ಬಿಂಬಿತವಾಗಿದೆ ಎಂಬುದನ್ನು ಉದಾಹರಣೆಗಳೊಂದಿಗೆ ವಿಮರ್ಶಿಸಿ. 10

**Q4. ಕೆಳಗಿನ ಎಲ್ಲಾ ಪ್ರಶ್ನೆಗಳಿಗೂ ಉತ್ತರಿಸಿ :**

(a) ಭರತ-ಬಾಹುಬಲಿ ಯುದ್ಧದ ಪ್ರಸಂಗದಲ್ಲಿನ ಬದಲಾವಣೆ ಕುರಿತು ಕವಿ ರತ್ನಾಕರವರ್ಣಿ ಪ್ರಕಟಿಸಿರುವ ಔಚಿತ್ಯವನ್ನು ವಿವರಿಸಿ. 20

(b) ಬಸವಣ್ಣನವರ ವಚನಗಳಲ್ಲಿ ಕಂಡುಬರುವ ಸಾಮಾಜಿಕ ಸುಧಾರಣೆಯ ಸ್ವರೂಪವನ್ನು ವಿವೇಚಿಸಿ. 20

(c) ಕನಕದಾಸರ ಕೀರ್ತನೆಗಳಲ್ಲಿ ಬಿಂಬಿತವಾಗಿರುವ ಭಾವಗಳನ್ನು, ನೋವುಗಳನ್ನು ವಿವರಿಸಿ. 10

www.prepp.in

Prepp
Your Personal Exams Guide

## SECTION B

**Q5.** **ಈ ಕೆಳಗಿನವುಗಳನ್ನು ಕುರಿತು ಟಿಪ್ಪಣಿ ಬರೆಯಿರಿ.**

**(ಪ್ರತಿಯೊಂದು 150 ಪದಗಳ ಮಿತಿಯ ಉತ್ತರವಾಗಲಿ)** *10×5=50*

(a) ಶೂದ್ರತಪಸ್ವಿ ನಾಟಕದಲ್ಲಿನ ಶಂಬೂಕನ ಪಾತ್ರ *10*

(b) ಪಿ. ಲಂಕೇಶರ 'ನಿವೃತ್ತರು' ಕಥೆಯಲ್ಲಿವೃದ್ಧರ ನಿಜ ಸ್ವರೂಪ *10*

(c) 'ಕೂಣವೇಗೌಡ' ಕಥನ ಗೀತೆ *10*

(d) ವಿಲಿಯಂ ಥಾಂಸ್ ಮತ್ತು ಜಾನಪದ *10*

(e) ಒಗಟುಗಳ ವರ್ಗೀಕರಣ *10*

**Q6.** **ಕೆಳಗಿನ ಎಲ್ಲಾ ಪ್ರಶ್ನೆಗಳಿಗೂ ಉತ್ತರಿಸಿ :**

(a) ಸಿದ್ಧಲಿಂಗಯ್ಯನವರ ಕವಿತೆಗಳಲ್ಲಿ ಜನಪರ ಆಶಯಗಳನ್ನು ಗುರುತಿಸಿ. *20*

(b) ನವ್ಯಕಥೆಗಳ ವಸ್ತು ಮತ್ತು ಭಾಷೆಯ ಲಕ್ಷಣಗಳನ್ನು ವಿವರಿಸಿ. *20*

(c) "ಮಾಧವಿಯು ಪುರುಷ ಶೋಷಣೆಯನ್ನು ಪ್ರತಿಭಟಿಸುವ ಆಧುನಿಕ ಮಹಿಳೆ" – ಈ ಹೇಳಿಕೆಯನ್ನು ಪರಾಮರ್ಶಿಸಿ. *10*

**Q7.** **ಕೆಳಗಿನ ಎಲ್ಲಾ ಪ್ರಶ್ನೆಗಳಿಗೂ ಉತ್ತರಿಸಿ :**

(a) "ಬೀದಿಮಕ್ಕಳು ಬೆಳದೊ" ಪುಸ್ತಕದ ಹಿನ್ನೆಲೆಯಲ್ಲಿ ಸಮುದಾಯಗಳ ಅನುಭವದ ಅಂತಃಸತ್ವವನ್ನು ಬಿಂಬಿಸುವಲ್ಲಿ ಗಾದೆಗಳ ಮಹತ್ವವನ್ನು ವಿವರಿಸಿ. *20*

(b) ಜಮೀನ್ದಾರಿ ಮತ್ತು ಆಡಳಿತಶಾಹಿ ವ್ಯವಸ್ಥೆಯ ದಲಿತ ಶೋಷಣೆಯ ಮುಖಗಳು 'ಒಡಲಾಳ' ಕಾದಂಬರಿಯಲ್ಲಿ ಹೇಗೆ ಚಿತ್ರಿತವಾಗಿವೆ. *20*

(c) 'ತೊಘಲಖ್' ನಾಟಕದ ಮಲತಾಯಿಯ ಪಾತ್ರದ ಮಹತ್ವವನ್ನು ಪರಿಚಯಿಸಿ. *10*

**Q8.** **ಕೆಳಗಿನ ಎಲ್ಲಾ ಪ್ರಶ್ನೆಗಳಿಗೂ ಉತ್ತರಿಸಿ :**

(a) ದೇವರ ನಂಬಿಕೆಯ ಬಗ್ಗೆ ನಾಸ್ತಿಕರು – ಆಸ್ತಿಕರು ಇವರಲ್ಲಿರುವ ಚರ್ಚೆ ಹಾಗೂ ವಾಗ್ವಾದಗಳನ್ನು ವಿಶ್ಲೇಷಿಸಿ. *20*

(b) "ಕನ್ನಡ ಜನಪದ ಕಥೆಗಳ ಎಲ್ಲಾ ವರ್ಗದ ಕಥೆಗಳಿಗೂ 'ಕನ್ನಡ ಜನಪದ ಕಥೆಗಳು' ಸಂಗ್ರಹ ಒಂದು ಉತ್ತಮ ಮಾದರಿಯಾಗಿದೆ" – ಈ ಹೇಳಿಕೆಯನ್ನು ವಿಮರ್ಶಿಸಿ. *20*

(c) 'ಬೆಟ್ಟದ ಜೀವ' ಕಾದಂಬರಿಯಲ್ಲಿ ಗೋಪಾಲಯ್ಯ ಭೂಮಿ ಮತ್ತು ನಿಸರ್ಗದೊಡನೆ ನಡೆಸುವ ಹೋರಾಟವನ್ನು ವಿವರಿಸಿ. *10*